- - **ಪಿ.ಸಿ.**

**ನಂ.403/2025**

**ಸಿ. ಡಬ್ಲ್ಯೂಃ 1**

**( ಇಂದು ದಿಃ 11/07/2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಲಾಯಿತು.)**

**<u>ಪಿರ್ಯಾದುದಾರರ ಸ್ವ ಪ್ರಮಾಣೀಕೃತ ಹೇಳಿಕೆ</u>**

ನಾನು ಸೊಸೈಟಿಯ ಪರವಾಗಿ ಸ್ವ ಪ್ರಮಾಣೀಕೃತ ಹೇಳಿಕೆಯ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದು ಅದರಲ್ಲಿ ಬರೆದ ಎಲ್ಲಾ ವಿಷಯಗಳು ನಿಜ ಇರುತ್ತವೆ. ಅದಕ್ಕೆ ನಾನು ಸಹಿ ಮಾಡಿರುತ್ತೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಚೆಕ್ಕನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಅದರಲ್ಲಿರುವ ಆರೋಪಿಯ ಸಹಿಯನ್ನು ನಿಪಿ-1(ಎ) ಎಂದು, ಬ್ಯಾಂಕ್ ಹಿಂಬರಹದ ದೃಢೀಕೃತ ನಕಲನ್ನು ನಿಪಿ-2 ಎಂದು, ಆರೋಪಿಗೆ ನೀಡಿರುವ ನೊಟೀಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಅಂಚೆ ರಶೀದಿ ನಿಪಿ-4 ಎಂದು, ಆರೋಪಿಗೆ ಕಳುಹಿಸಿದ ನೋಟೀಸು ಆರೋಪಿ ಸ್ವೀಕರಿಸದೇ ವಾಪಸ್ಸು ಬಂದಿರುವ ಅಂಚೆ ಲಕೋಟೆಯನ್ನು ನಿಪಿ-5 ಎಂದು, ಸದ್ರಿ ಲಕೋಟೆಯನ್ನು ತೆರೆದ ನ್ಯಾಯಾಲಯದಲ್ಲಿ ತೆರೆದು ನೋಡಿ ಅದರಲ್ಲಿ ಇರುವ ನೋಟೀಸಿನ ಪ್ರತಿಯನ್ನು ನಿಪಿ-5 ಎ ಎಂದು, ಠರಾವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು , ಆರೋಪಿಯ ಸಾಲದ ಅರ್ಜಿಯ ಯಥಾ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು, ಆರೋಪಿಯ ಸಾಲದ ಕರಾರು ಪತ್ರದ ಯಥಾ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು, ಡಿಮ್ಯಾಂಡ್ ಪ್ರಾಮಿಸರಿ ನೋಟಿನ ಯಥಾ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-9 ಎಂದು, ಬ್ಯಾಂಕ್ ರಶೀದಿಯ ಯಥಾ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-10 ಎಂದು, ಬ್ಯಾಂಕ್ ಸ್ಟೇಟ್ ಮೆಂಟಿನ ಯಥಾ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-11 ಎಂದು ಗುರುತಿಸಲಾಯಿತು.

ಆದ್ದರಿಂದ ದೂರಿನಲ್ಲಿ ಕೇಳಿದಂತೆ ಆದೇಶವಾಗಬೇಕೆಂದು ಕೋರುತ್ತೇನೆ .

**(ನನ್ನ ಹೇಳಿಕೆ ಪ್ರಕಾರ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ. ಹೇ.ಕೇ. ಸರಿ ಇದೆ**

**ಸಹಿ ಇದೆ**

**ಪ್ರ.ದ.ನ್ಯಾ.ದಂ., ಭಟ್ಕಳ**